**Akashvani : Bangalore**
**Regional Bulletin In Kannada**
**07.06.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**07.06.2025 / 18.40 hrs**
**<><*<><>*><>**

## ಮುಖ್ಯಾಂಶಗಳು

**೧. ಆಹಾರದ ಗುಣಮಟ್ಟದ ಮೇಲೆ ಕಠಿಣ ನಿಯಂತ್ರಣಕ್ಕೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಕರೆ**

**೨. ವಿಕಸಿತ ಕೃಷಿ ಸಂಕಲ್ಪ ಅಭಿಯಾನ ; ಆಧುನಿಕ ಬೇಸಾಯ ಪದ್ಧತಿ ಬಗ್ಗೆ ವಿಜ್ಞಾನಿಗಳಿಂದ ತರಬೇತಿ - ಮಾರ್ಗದರ್ಶನ**

**೩. ರೈತರೊಂದಿಗೆ ನಾಳೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಬೆಂಗಳೂರಿನಲ್ಲಿ ಸಂವಾದ**

**೪. ನಾಡಿನಾದ್ಯಂತ ತ್ಯಾಗ, ಬಲಿದಾನ, ಸಹೋದರತ್ವ ಸಂದೇಶ ಸಾರುವ ಬಕ್ರಿದ್ ಆಚರಣೆ**

**<><*<><>*><>**

ಆಹಾರ ಗುಣಮಟ್ಟದ ಮೇಲೆ ಕಠಿಣ ನಿಯಂತ್ರಣ ಅಗತ್ಯವಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದ್ದಾರೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ನಿಮ್ಹಾನ್ಸ್‌ನಲ್ಲಿ ಏರ್ಪಡಿಸಿದ್ದ ವಿಶ್ವ ಆಹಾರ ಸುರಕ್ಷತಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವರು ಈ ವಿಷಯ ತಿಳಿಸಿದರು. ಸಾರ್ವಜನಿಕ ಸ್ಥಳಗಳಲ್ಲಿ ಮಾರಾಟವಾಗುವ ಕಡಿಮೆ ಗುಣಮಟ್ಟದ ಆಹಾರದಿಂದ ಮಕ್ಕಳು ಮತ್ತು ವೃದ್ಧರ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತಿದೆ. ಇದರ ಸುರಕ್ಷತೆ ಖಚಿತಪಡಿಸಿಕೊಳ್ಳಲು ಸರ್ಕಾರಿ ಸಂಸ್ಥೆಗಳಿಂದ ಕಟ್ಟುನಿಟ್ಟಿನ ಜಾರಿ ಕ್ರಮಗಳು ಅಗತ್ಯ ಎಂದರು. ಕೇಂದ್ರ ಸಚಿವ ಜೆ.ಪಿ.ನಡ್ಡಾ, ಸಂಸದ ಪಿ.ಸಿ.ಮೋಹನ್, ನಿಮ್ಹಾನ್ಸ್ ನಿರ್ದೇಶಕಿ ಡಾ.ಪ್ರತಿಮಾ ಮೂರ್ತಿ ಹಾಜರಿದ್ದರು.

**<><*<><>*><>**

ನಿಂಬೆ ಬೆಳೆಯಲ್ಲಿ ರೈತರು ಹೆಚ್ಚಿನ ಆಸಕ್ತಿ ತೋರಿಸುತ್ತಿದ್ದಾರೆ ಎಂದು ಕೊಪ್ಪಳ ಕೃಷಿ ವಿಸ್ತರಣಾ ಕೇಂದ್ರದ ವಿಜ್ಞಾನಿ ಜ್ಯೋತಿ ಅಭಿಪ್ರಾಯಪಟ್ಟಿದ್ದಾರೆ. ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ಮಾತನಾಡಿದ ಅವರು, ಇದರ ಬಗ್ಗೆ ವಿಜ್ಞಾನಿಗಳು ರೈತರಿಗೆ ಉಪಯುಕ್ತ ಮಾಹಿತಿ ನೀಡಿದ್ದಾರೆ ಎಂದು ಹೇಳಿದರು.

**ಧ್ವನಿ : ಜ್ಯೋತಿ**

ಸಾವಯವ ಕೃಷಿಕ ಹನುಮಂತ ವಾಲ್ಮೀಕಿ ಆಧುನಿಕ ಬೇಸಾಯ ಪದ್ಧತಿಯನ್ನು ಯಾವ ರೀತಿ ಅಳವಡಿಸಿಕೊಳ್ಳಬೇಕು ಎಂಬುದರ ಬಗ್ಗೆ ವಿಶೇಷವಾಗಿ ಬೀಜ ಸಂಸ್ಕರಣೆ ಬಗ್ಗೆ ಮಾಹಿತಿ ನೀಡುತ್ತಿರುವುದು ರೈತರಿಗೆ ಉಪಯೋಗವಾಗಲಿದೆ ಎಂದು ಹೇಳಿದರು.

**ಧ್ವನಿ : ಹನುಮಂತ ವಾಲ್ಮೀಕಿ**

ವಿಜಯನಗರ ಜಿಲ್ಲೆಯ ಹಗರಿ ಬೊಮ್ಮನಹಳ್ಳಿ ತಾಲೂಕಿನಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಯಶಸ್ವಿಯಾಗಿ ಮುಂದುವರೆದಿದೆ. ಹಗರಿ ಕೃಷಿ ಕೇಂದ್ರದ ವಿಜ್ಞಾನಿ ಡಾ. ರವಿ ಅವರು, ಮಣ್ಣು ಪರೀಕ್ಷೆ, ಜೈವಿಕ ಗೊಬ್ಬರಗಳ ಬಳಕೆ, ಸುಧಾರಿತ ಬಿತ್ತನೆ ತಳಿಗಳ ಬಗ್ಗೆ ಮಾಹಿತಿ ನೀಡಿದರು. ಕೃಷಿಕ ಪಂಪಾನಾಯ್ಕ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡರು.

**ಧ್ವನಿ : ಪಂಪಾನಾಯ್ಕ**

ಕಾರ್ಯಕ್ರಮದಲ್ಲಿ ೩೫೦ಕ್ಕೂ ಹೆಚ್ಚು ರೈತರು, ಮಹಿಳೆಯರು ಪಾಲ್ಗೊಂಡಿದ್ದರು.

<><*<><>*><>

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಬೆಂಗಳೂರಿಗೆ ನಾಳೆ ಆಗಮಿಸಲಿದ್ದಾರೆ. ಬೆಂಗಳೂರಿನ ಹೆಸರಘಟ್ಟ ಸಮೀಪದಲ್ಲಿರುವ ಭಾರತೀಯ ತೋಟಗಾರಿಕೆ ಸಂಶೋಧನಾ ಕೇಂದ್ರದಲ್ಲಿ ಆಯೋಜಿಸಿರುವ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ನಂತರ ರೈತರೊಂದಿಗೆ ಸಂವಾದ ನಡೆಸಲಿದ್ದಾರೆ. ಆಧುನಿಕ ತಂತ್ರಜ್ಞಾನ ಮತ್ತು ಕೃಷಿಯಲ್ಲಿ ಸುಧಾರಿತ ಬಿತ್ತನೆ ಬೀಜ ಬಳಕೆ ಬಗ್ಗೆ ರೈತ ಸಮುದಾಯದಲ್ಲಿ ಜಾಗೃತಿ ಮೂಡಿಸಲು ಮೇ ೨೯ ರಿಂದ ಜೂನ್ ೧೨ರವರೆಗೆ ಅಭಿಯಾನ ಮುಂದುವರೆಯಲಿದೆ.

<><*<><>*><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ದುರಂತದ ಬಗ್ಗೆ ಹೈಕೋರ್ಟ್‌ನ ಹಾಲಿ ನ್ಯಾಯಾಧೀಶರಿಂದ ತನಿಖೆ ನಡೆಸಬೇಕು ಎಂದು ಕೇಂದ್ರ ಸಚಿವೆ ಶೋಭಾಕರಂದ್ಲಾಜೆ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಚಾರದಲ್ಲಿ ರಾಜ್ಯ ಸರ್ಕಾರದ ನಡವಳಿಕೆಗಳು ಮ್ಯಾಜಿಸ್ಟ್ರೇಟ್ ಮತ್ತು ಡಿ. ಕುನ್ನ ಆಯೋಗದ ತನಿಖೆ ಜನರಲ್ಲಿ ಅನೇಕ ಸಂಶಯ ಮತ್ತು ಗೊಂದಲಕ್ಕೆ ಎಡೆ ಮಾಡಿಕೊಡುತ್ತಿದೆ. ಈ ಹಿನ್ನೆಲೆಯಲ್ಲಿ ಹೈಕೋರ್ಟ್‌ನ ಹಾಲಿ ನ್ಯಾಯಾಧೀಶರಿಂದ ದುರಂತದ ಬಗ್ಗೆ ತನಿಖೆ ನಡೆಸಬೇಕು ಎಂದು ಹೈಕೋರ್ಟ್ ಮುಖ್ಯನ್ಯಾಯಮೂರ್ತಿಯವರಿಗೆ ತಾವು ಪತ್ರ ಬರೆದಿರುವುದಾಗಿ ಹೇಳಿದರು. ಘಟನೆಗೆ ಸಂಬಂಧಪಟ್ಟಂತೆ ಐವರು ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿರುವ ರಾಜ್ಯ ಸರ್ಕಾರದ ಕ್ರಮದ ಬಗ್ಗೆ ಕೇಂದ್ರ ಸಚಿವರು ಅಸಮಾಧಾನ ಹೊರಹಾಕಿದರು.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆ ಸ್ಥಾಪನೆ ಮಾಡಬೇಕು ಎಂಬ ಉದ್ದೇಶ ಇಟ್ಟುಕೊಂಡಿರುವುದಾಗಿ ಕೇಂದ್ರ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಮಂಡ್ಯದಲ್ಲಿ ಮೈಶುಗರ್ ಪ್ರೌಢಶಾಲೆಯ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಾಜ್ಯ ಸರ್ಕಾರ ಸಹಕಾರ ನೀಡಿದರೆ ಜಿಲ್ಲೆಯ ಜನರಿಗೆ ಅನುಕೂಲವಾಗುವಂತೆ ಬೃಹತ್ ಕೈಗಾರಿಕೆ ಸ್ಥಾಪಿಸಲಾಗುವುದು. ಮೈಶುಗರ್ ಶಾಲೆಗೆ ಕಾಯಕಲ್ಪ ನೀಡಲು ಎಲ್ಲಾ ನೆರವು ನೀಡಲು ಸಿದ್ಧ. ಇದಕ್ಕಾಗಿ ನೀಲನಕ್ಷೆ ತಯಾರಿಸಿ ಪ್ರಸ್ತಾವನೆ ಕಳುಹಿಸಿದರೆ ಶಾಲೆಯ ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ಇದಕ್ಕೂ ಮುನ್ನ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿನ್ನಸ್ವಾಮಿ ಕ್ರೀಡಾಂಗಣ ಬಳಿ ಸಂಭವಿಸಿದ ಕಾಲ್ತುಳಿತ ದುರಂತದಲ್ಲಿ ಮೃತಪಟ್ಟ ಘಟನೆಯನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ಅವರಿಗೆ ಹೆಚ್ಚಿನ ಪರಿಹಾರ ನೀಡಬೇಕು ಎಂದರು. ರಾಜ್ಯ ಸರ್ಕಾರ ಐವರು ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿರುವ ಕ್ರಮ ಸರಿಯಲ್ಲ ಎಂದು ಕೇಂದ್ರ ಸಚಿವರು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಪ್ರತಿವರ್ಷ ಜೂನ್ ೭ ರಂದು ವಿಶ್ವ ಆಹಾರ ಸುರಕ್ಷತಾ ದಿನವನ್ನು ಆಚರಿಸಲಾಗುತ್ತದೆ. ಆಹಾರ ಸುರಕ್ಷತೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶ. ದೇಹಕ್ಕೆ ಒಗ್ಗುವ ಪೌಷ್ಟಿಕಾಂಶದ ಆಹಾರ ಸೇವನೆಗೆ ಉತ್ತೇಜನ ಜೊತೆಗೆ ಶುದ್ಧ ನೀರು, ಪೌಷ್ಟಿಕಾಂಶಯುತ ಆಹಾರ ಸೇವಿಸುವ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದು ಈ ದಿನದ ವಿಶೇಷವಾಗಿದೆ.

<><*<><>*><>

ತ್ಯಾಗ-ಬಲಿದಾನದ ಸಂಕೇತವಾದ ಬಕ್ರಿದ್ ಹಬ್ಬವನ್ನು ರಾಜ್ಯಾದ್ಯಂತ ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿಗಳಿಂದ ಆಚರಿಸುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲದಲ್ಲಿ ಮುಸ್ಲಿಂ ಬಾಂಧವರು ಈದ್ಗಾ ಮೈದಾನದಲ್ಲಿ ಸಮೂಹಿಕ ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ಮುಸ್ಲಿಂ ಗುರುಗಳು ಪ್ರವಚನ ನೀಡಿದರು. ಹುಬ್ಬಳ್ಳಿ-ಧಾರವಾಡದಲ್ಲಿ ಮುಸ್ಲಿಂ ಬಾಂಧವರು ಈದ್ಗಾ ಮೈದಾನದಲ್ಲಿ ಸಮೂಹಿಕ ಪ್ರಾರ್ಥನೆ ಸಲ್ಲಿಸದರು. ಶಾಂತಿ, ಸುವ್ಯವಸ್ಥೆ ಕಾಪಾಡಲು ಬಿಗಿ ಭದ್ರತೆ ಏರ್ಪಡಿಸಲಾಗಿತ್ತು. ಹಾಸನ ಜಿಲ್ಲೆಯ ವಿವಿಧ ಈದ್ಗಾ ಮೈದಾನಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ದಾವಣಗೆರೆ ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು ಶ್ರದ್ಧಾಭಕ್ತಿಯಿಂದ ಹಬ್ಬ ಆಚರಿಸಿದರು. ಕೋಲಾರದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಯಾವುದೇ ಅಹಿತಕರ ಘಟನೆ ಸಂಭವಿಸಿದಂತೆ ನಗರದಾದ್ಯಂತ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಗದಗದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.

ಪಾಟೀಲ್ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡು ಮುಸ್ಲಿಂ ಸ್ನೇಹಿತರಿಗೆ ಶುಭ ಕೋರಿದರು. ವಿಜಯಪುರ ನಗರದ ವಿವಿಧ ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು. ಹಬ್ಬದ ಅಂಗವಾಗಿ ರಾಷ್ಟ್ರಪತಿ ದ್ರೌಪದಿಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಸ್ಲಿಂ ಬಾಂಧವರಿಗೆ ಶುಭಾಶಯ ಕೋರಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ

ರಾಜ್ಯದಲ್ಲಿ ನೈಋತ್ಯ ಮುಂಗಾರು ದುರ್ಬಲವಾಗಿತ್ತು. ಅನೇಕ ಕಡೆ ಮಳೆಯಾಗಿದೆ. ಕ್ಯಾಸಲ್‌ರಾಕ್, ಯಲಬುರ್ಗಾ, ಬೀದರ್ ಮತ್ತು ವಿಜಯಪುರದಲ್ಲಿ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಮುಂದಿನ ಒಂದು ವಾರ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯ ಮೋಡ ಕವಿದ ವಾತಾವರಣ. ಗರಿಷ್ಠ ೩೧, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು**

೧. ಮೈಸೂರಿನಲ್ಲಿ ನಿರ್ಮಿಸಲಿರುವ ವೀರಶೈವ ಲಿಂಗಾಯತ ಭವನ ನಿರ್ಮಾಣಕ್ಕಾಗಿ ವೀರಶೈವ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಈಶ್ವರ ಖಂಡ್ರೆ ೧ ಕೋಟಿ ರೂಪಾಯಿ ಚೆಕ್ ಹಸ್ತಾಂತರ ಮಾಡಿದ್ದಾರೆ.

೨. ಗಂಗಮ್ಮ ಸೋಮಪ್ಪ ಬೊಮ್ಮಾಯಿ ಟ್ರಸ್ಟ್ ವತಿಯಿಂದ ೨೦೨೩-೨೪ನೇ ಸಾಲಿನ ಸಾಹಿತ್ಯದ ವಿವಿಧ ಪ್ರಕಾರಗಳಲ್ಲಿ ಪ್ರಕಟವಾದ ಅತ್ಯುತ್ತಮ ಪುಸ್ತಕಗಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

೩. ಅರಣ್ಯ ಪರಿಸರ ಜೀವಿಶಾಸ್ತ್ರ ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಸಹಯೋಗದೊಂದಿಗೆ ಹವಾಮಾನ ಬದಲಾವಣೆಯಲ್ಲಿ ವಿವಿಧ ಇಲಾಖೆಗಳ ಪಾತ್ರ ಕುರಿತ ತರಬೇತಿ ಕಾರ್ಯಾಗಾರ ರಾಮನಗರದಲ್ಲಿಂದು ಯಶಸ್ವಿಯಾಗಿ ನೆರವೇರಿತು.

೪. ಮಾನಸಿಕ ಮತ್ತು ದೈಹಿಕ ಆರೋಗ್ಯ ಸುಧಾರಣೆಗೆ ಯೋಗ ವರದಾನ ಎಂದು ಹಿರಿಯ ಬಾಲಿವುಡ್ ನಟ ಅಮಿತಾಬ್ ಬಚ್ಚನ್ ಹೇಳಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**